# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1475 |
| ಮಾನ್ಯ ಸದಸ್ಯರ ಹೆಸರು | ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 17.03.2021 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಅನೇಕ ಜಾತಿಗಳವರು ತಮ್ಮನ್ನು ಹಿಂದುಳಿದ ವರ್ಗಕ್ಕೆ ಸೇರಿಸಿ ಮೀಸಲಾತಿ ಮತ್ತು ಇತರ ಸೌಲಭ್ಯಗಳನ್ನು ನೀಡಬೇಕೆಂದು ಒತ್ತಾಯಿಸುತ್ತಿದ್ದು ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; | ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧಿನಿಯಮ, 1995ರ ಪ್ರಕರಣ 9ರ ಕಲಂ (1) ರಲ್ಲಿ ಆಯೋಗದ ಪ್ರಕಾರ್ಯಗಳು ಈ ಮುಂದಿನಂತಿರತಕ್ಕದ್ದು ಎಂದರೆ:-<br><br>(i) ನಾಗರಿಕರ ಯಾವುದೇ ವರ್ಗವನ್ನು ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರಿಸಬೇಕೆಂದು ಬಂದ ಕೋರಿಕೆಗಳನ್ನು ಪರಿಶೀಲಿಸುವುದು ಮತ್ತು ಯಾವುದೇ ಹಿಂದುಳಿದ ವರ್ಗವನ್ನು ಅಂಥ ಪಟ್ಟಿಯಲ್ಲಿ ಹೆಚ್ಚಾಗಿ ಸೇರಿಸಲಾಗಿದೆ ಎಂದು ಅಥವಾ ಸೇರಿಸಲಾಗಿಲ್ಲವೆಂದು ಬಂದ ದೂರುಗಳ ವಿಚಾರಣೆ ಮಾಡುವುದು ಮತ್ತು ಸರ್ಕಾರಕ್ಕೆ ಅದು ಸಮುಚಿತವೆಂದು ಭಾವಿಸುವಂಥ ಸಲಹೆಯನ್ನು ನೀಡುವುದು;<br><br>ಅದರಂತೆ, ಆಯೋಗಕ್ಕೆ ಬಂದ ಮನವಿಗಳ ಬಗ್ಗೆ ಬಹಿರಂಗ ವಿಚಾರಣೆಯನ್ನು ಏರ್ಪಡಿಸಿ, ಸಲಹೆ/ಶಿಫಾರಸ್ಸುಗಳನ್ನೊಳಗೊಂಡ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುತ್ತದೆ. ಹಿಂದುಳಿದ ವರ್ಗಗಳ ಆಯೋಗದ ವರದಿಯನ್ನಾಧರಿಸಿ ಸರ್ಕಾರದ ವಿವೇಚನೆ ಅನುಸಾರ ಸಾಮಾಜಿಕವಾಗಿ ಮತ್ತು ಶೈಕ್ಷಣಿಕವಾಗಿ ಹಿಂದುಳಿದ ವರ್ಗಗಳಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಮೀಸಲಾತಿಯ ಅವಕಾಶವನ್ನು ಕಲ್ಪಿಸಲಾಗುತ್ತಿದೆ. |

| | | |
|---|---|---|
| ಆ) | ಚಳುವಳಿ ಮೂಲಕ ಒತ್ತಾಯ ತರುವ ಜಾತಿಗಳನ್ನು ಹಿಂದುಳಿದ ವರ್ಗಕ್ಕೆ ಸೇರಿಸಿದರೆ ನಿಜವಾಗಿ ಹಿಂದುಳಿದ ಜಾತಿ ಮತ್ತು ವರ್ಗಕ್ಕೆ ಸೇರಿರುವ ಅಸಂಘಟಿತ ಜಾತಿಯವರಿಗೆ ಅನ್ಯಾಯವಾಗುವುದಿಲ್ಲವೆ; | ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧಿನಿಯಮ, 1995ರ ಕಲಂ 9 (1) ರಂತೆ ಕ್ರಮ ವಹಿಸುವುದರಿಂದ ಸದರಿ ಪ್ರಶ್ನೆಯು ಉದ್ಭವಿಸುವುದಿಲ್ಲ. |
| ಇ) | ಹಿಂದುಳಿದ ವರ್ಗಕ್ಕೆ ಸೇರಿಸಲು ಸೂಕ್ತ ಮಾನದಂಡಗಳನ್ನು ನಿಗದಿಪಡಿಸಿ ಅರ್ಹರಾಗಿರುವವರನ್ನು ಹಿಂದುಳಿದ ವರ್ಗಕ್ಕೆ ಸೇರಿಸುವ ನಿರ್ಧಾರ ಪ್ರಕಟಿಸಲು ಸರ್ಕಾರ ಯಾವ ರೀತಿಯ ಕ್ರಮಗಳನ್ನು ತೆಗೆದುಕೊಳ್ಳಲಿದೆ? | ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧಿನಿಯಮ, 1995ರ ಪ್ರಕರಣ 9ರ ಕಲಂ (1) ರಂತೆ ಹಿಂದುಳಿದ ವರ್ಗಗಳ ಆಯೋಗವು ನಿಯಮಾನುಸಾರ ಪರಿಶೀಲಿಸಿ ಸರ್ಕಾರಕ್ಕೆ ವರದಿಯನ್ನು ನೀಡಬೇಕಾಗುತ್ತದೆ. ನ್ಯಾಯಾಲಯಗಳ ಆದೇಶ ಹಾಗೂ ಆಯೋಗದ ವರದಿಯನ್ನಾಧರಿಸಿ ಸರ್ಕಾರದ ವಿವೇಚನೆ ಬಳಸಿ ಅರ್ಹ ಹಿಂದುಳಿದ ವರ್ಗಗಳಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಮೀಸಲಾತಿಯ ಅವಕಾಶವನ್ನು ಕಲ್ಪಿಸಲಾಗುವುದು. |

**ಸಂಖ್ಯೆ:**ಹಿಂವಕ 79 ಬಿಸಿಎ 2021

(ಕೋಟಾ ಶ್ರೀನಿವಾಸ ಪೂಜಾರಿ)
ಮುಜರಾಯಿ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು